**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪಂರಾ 163 ಜಿಪಸ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:13-03-2020.

ಇವರಿಂದ:

**ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್),**
**ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,**
**ಬಹುಮಹಡಿ ಕಟ್ಟಡ,**
**ಬೆಂಗಳೂರು.**

ಇವರಿಗೆ:

**ಕುಲಸಚಿವರು,**
ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ವಿಶ್ವವಿದ್ಯಾಲಯ,
ಗದಗ.

ಮಾನ್ಯರೆ,

**ವಿಷಯ:** ಕೋವಿಡ್-19 (ಕೊರೊನಾ ವೈರಸ್) ನಿಯಂತ್ರಿಸುವ ಹಿನ್ನಲೆಯಲ್ಲಿ ವಿಶ್ವವಿದ್ಯಾಲಯಗಳಿಗೆ/ ಕಾಲೇಜುಗಳಿಗೆ ಹಾಗೂ ಪಾಲಿಟೆಕ್ನಿಕ್‌ಗಳಿಗೆ ರಜೆ ಘೋಷಿಸುವ ಬಗ್ಗೆ.

**ಉಲ್ಲೇಖ:** ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಕೋವಿಡ್-19 (ಕೊರೊನಾ ವೈರಸ್) ನಿಯಂತ್ರಿಸುವ ಸಭೆಯ ನಡವಳಿಗಳ ದಿನಾಂಕ: 13-03-2020.

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 13-03-2020 ರಂದು ನಡೆದ ಸಭೆಯಲ್ಲಿ ಕೋವಿಡ್-19(ಕೊರೋನಾ ವೈರಸ್) ನಿಯಂತ್ರಿಸುವ ದೃಷ್ಟಿಯಿಂದ ದಿನಾಂಕ: 14-03-2020 ರಿಂದ ಜಾರಿಗೆ ಬರುವಂತೆ 15 ದಿನಗಳ ಕಾಲ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ವಿಶ್ವವಿದ್ಯಾಲಯಗಳು / ಕಾಲೇಜುಗಳು / ಪಾಲಿಟೆಕ್ನಿಕ್ / ಖಾಸಗಿ ವಿಶ್ವವಿದ್ಯಾಲಗಳಿಗೆ ರಜೆ ಘೋಷಿಸಲು ನಿರ್ಣಯಿಸಿರುತ್ತಾರೆ. ಆದರಂತೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಗೆ ಒಳಪಡುವ ಗದಗಿನ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯಕ್ಕೂ ಸಹ ರಜೆ ಘೋಷಿಸಲಾಗಿದೆ. ಈ ಅವಧಿಯಲ್ಲಿ ಯಾವುದಾದರೂ ಪರೀಕ್ಷೆ ನಿಗಧಿಯಾಗಿದ್ದಲ್ಲಿ ಅದನ್ನು ಮುಂದೂಡಿ ಬೇರೆ ದಿನಾಂಕದಂದು ಪುನರ್ ಆಯೋಜಿಸುವಂತೆ ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,
13/03/2020
**(ಸಿ ಮಂಜುಳಾ)**
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್‌ಇಲಾಖೆ
13.03.2020

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ
4. ಮುಖ್ಯಸ್ಥರು, ಗಣಕಕೋಶ ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು